ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/04/ಸುತ್ತೋಲೆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ: 12.10.2022.

**ಸುತ್ತೋಲೆ**

**ವಿಷಯ:** ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರಿಗೆ ಶಿಕ್ಷಣ ವ್ಯವಸ್ಥೆಯಲ್ಲಿ ಸೌಲಭ್ಯಗಳನ್ನು ಒದಗಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಇಡಿ 85 ವಿವಿಧ 2022 ಬೆಂಗಳೂರು, ದಿನಾಂಕ:09.09.2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ತಿಳಿಸಿರುವಂತೆ, ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರಿಗೆ ಶಿಕ್ಷಣ ವ್ಯವಸ್ಥೆಯಲ್ಲಿ ಈ ಕೆಳಕಂಡ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

- ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಹಾಗೂ ವಸತಿ ನಿಲಯಗಳ ಅರ್ಜಿ ನಮೂನೆಯಲ್ಲಿ ಸ್ತ್ರೀ ಮತ್ತು ಪುರುಷ ಲಿಂಗದ ಜೊತೆಗೆ ತೃತೀಯ ಲಿಂಗ ಎಂಬ ಗುರುತನ್ನು ಸೇರಿಸುವುದು.
- ವಸತಿ ನಿಲಯಗಳಲ್ಲಿ ತೃತೀಯ ಲಿಂಗಿ ವಿದ್ಯಾರ್ಥಿಗಳಿಗೆ ಅವರ ಸ್ವಯಂ - ನಿರ್ಧರಿತ ಲಿಂಗ ಗುರುತಿನ ಪ್ರಕಾರ ವಸತಿ ಕಲ್ಪಿಸುವುದು ಕಡ್ಡಾಯವಾಗಿರುತ್ತದೆ.
- ವಸತಿ ನಿಲಯಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರು (Transgender)ಗಳಿಗೆ ಪ್ರತ್ಯೇಕ ವಸತಿ ಸೌಲಭ್ಯವನ್ನು ಒದಗಿಸುವುದು.
- ತೃತೀಯ ಲಿಂಗಿ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಮಾರ್ಗಸೂಚಿಗಳನ್ನು ರೂಪಿಸಲು ಅಥವಾ ವಿದ್ಯಾರ್ಥಿಗಳು ತಮ್ಮ ಲಿಂಗ ಗುರುತನ್ನು ವಿಶ್ವವಿದ್ಯಾನಿಲಯ ದಾಖಲೆಗಳಲ್ಲಿ ಬದಲಾಯಿಸಲು ಇಚ್ಛಿಸಿದಾಗ ಅವರ ಲಿಂಗ ಗುರುತಿನ ಸ್ಥಿತಿಗೆ ಯಾವುದೇ ಶಸ್ತ್ರ ಚಿಕಿತ್ಸೆ ಪುರಾವೆ ಅಥವಾ ವೈದ್ಯಕೀಯ ಪ್ರಮಾಣ ಪತ್ರ ಇವುಗಳನ್ನು ಕಡ್ಡಾಯಗೊಳಿಸದೇ ಅವರ ಸ್ವಯಂಘೋಷಿತ ಅಫಿಡವಿಟ್ (ಪ್ರಮಾಣ ಪತ್ರ)ಗಳನ್ನು ಮಾತ್ರ ಪರಿಗಣನೆಗೆ ತೆಗೆದುಕೊಳ್ಳುವುದು.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು- ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಿದೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
2. ಸರ್ಕಾರದ ಅಧೀನ ಕಾರ್ಯದರ್ಶಿಗಳ ಆಪ್ತ ಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
3. ಕಛೇರಿ ಪ್ರತಿ.